**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ ಚನ್ನರಾಯಪಟ್ಟಣ**

**ಸಿಸಿ ಸಂಖ್ಯೆ: 1061/2021** **CW**–3 **PW**–3

**ಸಾಕ್ಷಿಯನ್ನು ದಿಃ 29.10.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

| | |
|---|---|
| ಹೆಸರುಃ | ಕೃಷ್ಣ |
| ತಂದೆಯ ಹೆಸರುಃ | ಶಿವನಂಜೇಗೌಡ |
| ವಯಸ್ಸುಃ | 45 ವರ್ಷ |
| ವೃತ್ತಿಃ | ವ್ಯವಸಾಯ |
| ವಾಸ ಸ್ಥಳಃ | ಮಲ್ಲವನ ಘಟ್ಟ ಗ್ರಾಮ |

**ಮುಖ್ಯವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ಚಾಸಾ –1 ಮತ್ತು ಚಾಸಾ–2 ರವರು ಗೊತ್ತಿಲ್ಲ, ಚಾಸಾ–4 ರಿಂದ ಚಾಸಾ–6 ರವರ ಪರಿಚಯವಿದೆ. ಆರೋಪಿ ಗೊತ್ತಿಲ್ಲ.

ಪೋಲೀಸರಿಗೆ ಯಾವುದೇ ಹೇಳಿಕೆ ನೀಡಿಲ್ಲ. ಗಲಾಟೆ ಬಗ್ಗೆ ನನಗೆ ಏನು ಗೊತ್ತಿಲ್ಲ.

**(ಈ ಹಂತದಲ್ಲಿ ಮಾನ್ಯ ಎಪಿಪಿಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು.)**

**ಪಾಟೀ ಸವಾಲುಃ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ದಿಃ 03.05.2021 ರಂದು ಆರೋಪಿ ಮತ್ತು ಚಾಸಾ–1 ರವರು ಮನೆಯ ವೈರ್ ಕಿತ್ತು ಹಾಕಿರುವ ವಿಚಾರಕ್ಕೆ ಗಲಾಟೆ ಆಗಿದ್ದು, ಆಗ ಚಾಸಾ–1 ರವರು ಪ್ರಶ್ನಿಸಿದಾಗ ಆರೋಪಿ ಅವಾಚ್ಯ ಶಬ್ದಗಳಿಜದ ಬೈದಿರುತ್ತಾರೆ ಎಂದರೆ ಸರಿಯಲ್ಲ. ನಂತರ ಆರೋಪಿ ದೊಣ್ಣೆಯಿಂದ ಚಾಸಾ–1 ರವರ ತಲೆ, ಮುಖಕ್ಕೆ ಹೊಡೆದಿರುತ್ತಾರೆ ಎಂದರೆ ಸರಿಯಲ್ಲ. ನಂತರ ನಿನಗೆ ಗತಿ ಕಾಣಿಸುತ್ತೇನೆ ಎಂದು ಕೊಲೆ ಬೆದರಿಕೆ ಹಾಕಿರುತ್ತಾರೆ ಎಂದರೆ ಸರಿಯಲ್ಲ. ನಾನು ಮತ್ತು ಚಾಸಾ–2 ರವರು ಜಗಳ ಬಿಡಿಸಿರುತ್ತೇವೆ ಎಂದರೆ ಸರಿಯಲ್ಲ. ಈ ಸಂಬಂಧ ಚಾಸಾ–1 ರವರು ಚಿಕಿತ್ಸೆ

ಪಡೆದುಕೊಂಡಿರುತ್ತಾರೆ ಎಂದರೆ ಸರಿಯಲ್ಲ. ದಿಃ 04.05.2021 ರಂದು ಪೋಲೀಸರಿಗೆ ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿಗೆ ದಿಃ 04.05.2021 ರ ಹೇಳಿಕೆಯನ್ನು ಓದಿ ಹೇಳಲಾಗಿ ಅದನ್ನು ಅಲ್ಲಗಳೆದಿದ್ದು ಅದನ್ನು ನಿಪಿ–4 ಎಂದು ಗುರುತಿಸಲಾಯಿತು. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದ ಃ**

ಆರೋಪಿ ಪರ ವಕೀಲರು ಪಾಟಿ ಸವಾಲು ಇಲ್ಲ ಎಂದು ನಿವೇದಿಸಿಕೊಂಡಿದ್ದು ಅನುಮತಿಸಲಾಯಿತು.

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕೃತ ಮಾಡಲಾಗಿದೆ).**

**ಓ ಹೇ ಕೇ ಸರಿ ಇದೆ.**

**(ಕುಸುಮ ವಿ .)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ., ಚನ್ನರಾಯಪಟ್ಟಣ**